# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಪಿ. ಗುರುದತ್. ವ್ಯವಸ್ಥಾಪಕರು (ತಾಂತ್ರಿಕ)-ಪಿಪಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ಇವರನ್ನು ಗುತ್ತಿಗೆ ಆಧಾರದ ಮೇಲೆ ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆಗೆ ನೇಮಿಸುವ ಬಗ್ಗೆ – ಆದೇಶ.

ಓದಲಾಗಿದೆ:-

1. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ನಡವಳಿ ದಿನಾಂಕ. 20-10-2011
2. ಉಪ ಪ್ರಧಾನ ವ್ಯವಸ್ಥಾಪಕರು ( ಸಿ&ಆ), ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ಇವರ ಪತ್ರ ಸಂಖ್ಯೆ. ಕ.ರಾ.ಹ.ಸಂ./ಪ್ರ.ಕ./ಸಿಬ್ಬಂದಿ/2423, ದಿನಾಂಕ. 16-11-2011

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ. 20-10-2011ರ ಪತ್ರದಲ್ಲಿ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಶ್ರೀ ಪಿ. ಗುರುದತ್. ಬಿ.ಇ. (ಸಿವಿಲ್) ಇವರು ಪ್ರಸ್ತುತ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಸದರಿಯವರನ್ನು ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕೇಂದ್ರ ಕಛೇರಿ, ಬೆಂಗಳೂರು ಇಲ್ಲಿ ಖಾಲಿ ಇರುವ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ನಿಯೋಜಿಸಬೇಕೆಂದು ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ 16-11-2011ರ ಪತ್ರದಲ್ಲಿ ಉಪ ಪ್ರಧಾನ ವ್ಯವಸ್ಥಾಪಕರು (ಸಿ & ಆ), ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ರವರು ಶ್ರೀ ಪಿ.ಗುರುದತ್, ವ್ಯೆವಸ್ಥಾಪಕರು (ತಾಂತ್ರಿಕ)-ಪಿಪಿ ಇವರನ್ನು ಸಂಸ್ಥೆಯ ಷರತ್ತು ಮತ್ತು ನಿಬಂಧನೆಗೊಳಪಟ್ಟು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ನಿಯೋಜನೆ ಮೇರೆಗೆ ನೇಮಕ ಮಾಡಲು ಸಂಸ್ಥೆಯ ಅಭ್ಯಂತರವೇನೂ ಇರುವುದಿಲ್ಲವೆಂದೂ, ಸದರಿ ಉದ್ಯೋಗಿಯ ಮೂಲ ವೇತನವು ರೂ. 18150-450-19500-525-22650-600-26250-675-26925 ವೇತನ ಶ್ರೇಣಿಯಲ್ಲಿ ರೂ. 22125-00 ಗಳಾಗಿರುತ್ತದೆಯೆಂದೂ, ಪ್ರಸ್ತುತ ಸದರಿ ಉದ್ಯೋಗಿಯ ಮೇಲೆ ಯಾವುದೇ ಇಲಾಖಾ ತನಿಖೆ ಜಾರಿಯಲ್ಲಿರುವುದಿಲ್ಲವಾದ್ದರಿಂದ ಶ್ರೀಯುತರನ್ನು ನಿಯೋಜನೆ ಮೇಲೆ ನೇಮಕ ಮಾಡಿಕೊಂಡಲ್ಲಿ ಅವರನ್ನು ಸಂಸ್ಥೆಯ ಸಿಬ್ಬಂದಿ ನಿಯಮಾವಳಿಗಳ ಷರತ್ತು ಮತ್ತು ನಿಬಂಧನೆಗಳನ್ವಯ ಬಿಡುಗಡೆಗೊಳಿಸಲು ಮುಂದಿನ ಕ್ರಮ ಕೈಗೊಳ್ಳಲಾಗುವುದೆಂದು ವರದಿ ಮಾಡಿರುತ್ತಾರೆ.

ಸರ್ಕಾರವು, ಶ್ರೀ ಪಿ. ಗುರುದತ್. ವ್ತವಸ್ಥಾಪಕರು (ತಾಂತ್ರಿಕ)-ಪಿಪಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ಇವರನ್ನು ಗುತ್ತಿಗೆ ಆಧಾರದ ಮೇಲೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಬೆಂಗಳೂರು ಇಲ್ಲಿ ಖಾಲಿ ಇರುವ ಉಪ ನಿರ್ದೇಶಕರು (ತಾಂತ್ರಿಕ) ಹುದ್ದೆಗೆ ನೇಮಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

***ಆದೇಶ ಸಂಖ್ಯೆ: ಗ್ರಾಅಪ 332 ಸೇಶಿಕಾ 2011, ಬೆಂಗಳೂರು, ದಿನಾಂಕ. 02-12-2011***

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 15(1)(ಬಿ)(ii) ರನ್ವಯ

ಈ ಆದೇಶಕ್ಕೆ ಲಗತ್ತಿಸಿರುವ ಷರತ್ತು ಮತ್ತು ನಿಬಂದನೆಗಳಿಗೆ ಒಳಪಟ್ಟು ಶ್ರೀ ಪಿ. ಗುರುದತ್. ವ್ಯವಸ್ಥಾಪಕರು (ತಾಂತ್ರಿಕ)-ಪಿಪಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು (ಪ್ರಸ್ತುತ ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು ಇಲ್ಲಿ ಕಾರ್ಯಪಾಲಕ ಇಂಜಿನಿಯರ್ ಆಗಿ ಕಾರ್ಯನಿರ್ವಹಿಸುತ್ತಿರುವ) ಇವರನ್ನು ಗುತ್ತಿಗೆ ಆಧಾರದ ಮೇಲೆ ಈ ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಒಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆವಿಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ನಿರ್ದೇಶಕರ ಕಚೇರಿ, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಬೆಂಗಳೂರು ಇಲ್ಲಿ ಖಾಲಿ ಇರುವ ಉಪ ನಿರ್ದೇಶಕರು (ತಾಂತ್ರಿಕ) ಹುದ್ದೆಗೆ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

2/12/2011
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಲೋಕೋಪಯೋಗಿ ಇಲಾಖೆ.
3. ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಬೆಂಗಳೂರು.
4. ಉಪ ಪ್ರಧಾನ ವ್ಯವಸ್ಥಾಪಕರು (ಸಿ&ಆ), ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು
5. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು
7. ಅಧೀಕ್ಷಕ ಇಂಜಿನಿಯರ್, ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು
8. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
9. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ಬೆಂಗಳೂರು.
10. ಶ್ರೀ ಪಿ. ಗುರುದತ್. ವ್ಯವಸ್ಥಾಪಕರು (ತಾಂತ್ರಿಕ)-ಪಿಪಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು
11. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
12. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ)
13. ಗ್ರಾ.ಅ.ರಾಜ್ ಇಲಾಖೆಯ ಕಾರ್ಯದರ್ಶಿಯವರು ಮತ್ತು ಉಪ ಕಾರ್ಯದರ್ಶಿಯವರು (ಆಡಳಿತ) ಇವರ ಆಪ್ತ ಸಹಾಯಕರು.
14. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
15. ಹೆಚ್ಚುವರಿ ಪ್ರತಿ:ರಕ್ಷಾ ಕಡತ:ಮಾಹಿತಿ ಕೇಂದ್ರ.

## ಗುತ್ತಿಗೆ / ಒಪ್ಪಂದದ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳು

1. **ಅವಧಿ:** ಶ್ರೀ ಪಿ. ಗುರುದತ್. ವ್ಯವಸ್ಥಾಪಕರು (ತಾಂತ್ರಿಕ)-ಪಿಪಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ಇವರ ಒಪ್ಪಂದದ ನೇಮಕಾತಿಯ ಅವಧಿಯು ದಿನಾಂಕ. 30-11-2011 ರಿಂದ ದಿನಾಂಕ: 31-10-2012ರವರೆಗೆ ಅಥವಾ ಮುಂದಿನ ಆದೇಶ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಇರುತ್ತದೆ.

2. **ಗುತ್ತಿಗೆ ನೇಮಕಾತಿಯ ಪ್ರಾರಂಭ ಹಾಗೂ ಅಂತ್ಯ :** ಸದರಿ ಅಧಿಕಾರಿರವರ ಒಪ್ಪಂದದ ನೇಮಕಾತಿಯು ದಿನಾಂಕ. 30-11-2011 ರಿಂದ ಪ್ರಾರಂಭಗೊಂಡು ಹುದ್ದೆಯ ಪ್ರಭಾರವನ್ನು ಹಿಂದಕ್ಕೆ ವಹಿಸಿಕೊಟ್ಟ ದಿನಾಂಕದಂದು ಮುಕ್ತಾಯಗೊಳ್ಳುತ್ತದೆ.

3. **ವೇತನ ಮತ್ತು ಇತರೆ ಭತ್ಯೆಗಳು:** ಶ್ರೀ ಪಿ. ಗುರುದತ್. ವ್ಯವಸ್ಥಾಪಕರು (ತಾಂತ್ರಿಕ)-ಪಿಪಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ಇವರು ಒಪ್ಪಂದದ ನೇಮಕಾತಿಯ ಅವಧಿಯಲ್ಲಿ ಅವರ ಮಾತೃ ಇಲಾಖೆಯಲ್ಲಿ ಪಡೆಯುತ್ತಿದ್ದ ವೇತನ, ತುಟ್ಟಿಭತ್ಯೆ, ಕಾರ್ಯನಿರ್ವಹಿಸುವ ಸ್ಥಳಕ್ಕೆ ಅನ್ವಯಿಸುವ ಮನೆ ಬಾಡಿಗೆ ಭತ್ಯೆ, ನಗರ ಪರಿಹಾರ ಭತ್ಯೆ ಪಡೆಯಲು ಅರ್ಹರಿರುತ್ತಾರೆ. ಆದರೆ, ನಿಯೋಜನೆಯ ಭತ್ಯೆ ಅನ್ಯ ಸೇವಾ ಭತ್ಯೆ ಅಥವಾ ಇನ್ನಾವುದೇ ಭತ್ಯೆ, ಹೆಚ್ಚಿನ ಕಾಲದ ಭತ್ಯೆ, ಬೋನಸ್, ಅನುಗ್ರಹ ಪೂರ್ವ ಭತ್ಯೆ ಪಡೆಯಲು ಅರ್ಹರಲ್ಲ.

4. **ರಜಾ ನಿಯಮಗಳು:** ಇವರ ಮಾತೃ ಇಲಾಖೆಯಲ್ಲಿನ ರಜಾ ನಿಯಮಗಳಿಗೆ ಅರ್ಹರಿರುತ್ತಾರೆ.

5. **ರಜಾ ವೇತನ ವಂತಿಗೆ :** ಅಧಿಕಾರಿಯವರ ಮೂಲ ವೇತನದ ಶೇಕಡಾ 11 ರಷ್ಟನ್ನು ರಜಾ ವೇತನ ವಂತಿಗೆಯಾಗಿ ಸರ್ಕಾರವು ಪಾವತಿಸುತ್ತದೆ.

6. **ಭವಿಷ್ಯ ನಿಧಿ ವಂತಿಗೆ:** ಅಧಿಕಾರಿಯ ಮೂಲ ವೇತನ ಮತ್ತು ತುಟ್ಟಿಭತ್ಯೆಯ ಶೇ.12ರಷ್ಟನ್ನು ಸರ್ಕಾರದ ವತಿಯಿಂದ ವಂತಿಗೆ, ಮತ್ತು ಅಧಿಕಾರಿಯ ಮೂಲ ವೇತನ ಮತ್ತು ತುಟ್ಟಿಭತ್ಯೆಯ ಶೇಕಡಾ 12 ರಷ್ಟನ್ನು ವಂತಿಗೆಯಾಗಿ ತಿಂಗಳಿನ ಸಂಬಳದಲ್ಲಿ ಕಟಾಯಿಸಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ರವರಿಗೆ ಪಾವತಿಸತಕ್ಕದ್ದು.

7. **ಉಪದಾನ ವಂತಿಗೆಗಳು:** ಸರ್ಕಾರವು ಪ್ರತಿ ತಿಂಗಳು 8.33% ರಷ್ಟು ವೇತನ ಮತ್ತು ಅದಕ್ಕೆ ಸಮನಾದ ತುಟ್ಟಿ ಭತ್ಯೆಯೊಂದಿಗೆ ಉಪದಾನ ವಂತಿಗೆಯಾಗಿ ನೀಡುತ್ತದೆ.

8. **ವೈದ್ಯಕೀಯ ರಿಯಾಯಿತಿ:** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ ಅನ್ವಯಂ ವೈದ್ಯಕೀಯ ವೆಚ್ಚವನ್ನು ಪಡೆಯಲು ಅರ್ಹರಿರುತ್ತಾರೆ.

(3)

9. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ನಿಗಧಿಪಡಿಸಿರುವ ಕೆಲಸಗಳನ್ನು ಹಾಗೂ ಸರ್ಕಾರವು / ಮೇಲಾಧಿಕಾರಿಗಳು ಕಾಲಕಾಲಕ್ಕೆ ವಹಿಸಿಕೊಡುವ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

10. 1966ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು .1957 ರ ನಿಯಮಾವಳಿಗೆ ಅವರು ಬದ್ಧರಾಗಿರುತ್ತಾರೆ.

11. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.

12. ಶ್ರೀ ಪಿ. ಗುರುದತ್. ವ್ಯವಸ್ಥಾಪಕರು (ತಾಂತ್ರಿಕ)–ಪಿಪಿ, ರವರು ಕಾರ್ಯಪಾಲಕ ಇಂಜಿನಿಯರ್ ಹುದ್ದೆಯ ಕೆಲಸ ಕಾರ್ಯಗಳನ್ನು ಶ್ರದ್ಧಾಭಕ್ತಿಯಿಂದ ನಿರ್ವಹಿಸತಕ್ಕದ್ದು ಹಾಗೂ ತಮ್ಮ ಕರ್ತವ್ಯಗಳನ್ನು ನಿರ್ವಹಿಸುವಾಗ ತಿಳಿದು ಬರುವಂತಹ ಕಚೇರಿಯ ಅಧಿಕೃತ ಗೌಪ್ಯ ಮಾಹಿತಿಗಳ ಬಗ್ಗೆ ಕಟ್ಟುನಿಟ್ಟಾಗಿ ಗೌಪ್ಯತೆಯನ್ನು ಕಾಪಾಡತಕ್ಕದ್ದು.

13. ಅಧಿಕಾರಿಯ ದುರ್ನಡತೆಯಿಂದ ಸರ್ಕಾರಕ್ಕೆ ಉಂಟಾಗುವ ಯಾವುದೇ ನಷ್ಟಗಳನ್ನು ಭರಿಸಿಕೊಡಲು ಅಧಿಕಾರಿಯು ಭಾದ್ಯತೆಯುಳ್ಳವರಾಗಿರುತ್ತಾರೆ.

14. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ ಐವತ್ತು (ರೂ. 50–00) ರೂಪಾಯಿಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರಿಂದ ಬರೆಯಿಸಿಕೊಳ್ಳತಕ್ಕದ್ದು.

2/12/11
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು–ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.